# ತುಮಕೂರು ವಿಶ್ವವಿದ್ಯಾನಿಲಯ

ಬಿ. ಹೆಚ್. ರಸ್ತೆ , ತುಮಕೂರು – 572 103 , ದೂರವಾಣಿ ಸಂಖ್ಯೆ : 0816–2254546


ಸಂಖ್ಯೆ:ತು.ವಿ:ಅ.ವಿ:2026-27/1341

ದಿನಾಂಕ:15.07.2026

## : ಸುತ್ತೋಲೆ :

**ವಿಷಯ : 2026-27 ನೇ ಶೈಕ್ಷಣಿಕ ಸಾಲಿಗೆ ವಿವಿಧ ಸ್ನಾತಕ ವಿಭಾಗಗಳ ಅತಿಥಿ ಉಪನ್ಯಾಸಕರ ನೇಮಕಾತಿಗೆ ಸ್ವೀಕೃತಗೊಂಡ ಅರ್ಜಿಗಳನ್ನು ಪರಿಶೀಲಿಸುವ ಕುರಿತು.**

ಉಲ್ಲೇಖ :
1. ವಿಶ್ವವಿದ್ಯಾನಿಲಯದ ಅಧಿಸೂಚನೆ ಸಂಖ್ಯೆ:ತು.ವಿ:ಅ.ವಿ:ಅ.ಉ.ನೇ:2026-27/1249 ದಿನಾಂಕ:07.07.2026
2. ವಿಶ್ವವಿದ್ಯಾನಿಲಯದ ಅಧಿಸೂಚನೆ ಸಂಖ್ಯೆ:ತು.ವಿ:ಅ.ವಿ:ಅ.ಉ.ನೇ:2026-27/1250 ದಿನಾಂಕ:07.07.2026

* * * * *

ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿ 2026-27 ನೇ ಶೈಕ್ಷಣಿಕ ಸಾಲಿಗೆ ಲಭ್ಯವಿರುವ ಉಳಿಕೆ ಕಾರ್ಯಭಾರಕ್ಕೆ ವಿವಿಧ ಸ್ನಾತಕ ವಿಭಾಗಗಳ ಅತಿಥಿ ಉಪನ್ಯಾಸಕರ ನೇಮಕಾತಿಗೆ ದಿನಾಂಕ:07.07.2026 ರಂದು ಅಧಿಸೂಚನೆ ಹೊರಡಿಸಿ ದಿನಪತ್ರಿಕೆಗಳಲ್ಲಿ ಪತ್ರಿಕಾ ಪ್ರಕಟಣೆ ನೀಡಿ ಆನ್‌ಲೈನ್ ಮುಖಾಂತರ ದಿನಾಂಕ:18.07.2026 ರೊಳಗಾಗಿ ಅರ್ಜಿ ಸಲ್ಲಿಸಲು ತಿಳಿಸಲಾಗಿರುತ್ತದೆ.

ಈ ಸಂಬಂಧ ಆನ್‌ಲೈನ್ ಮೂಲಕ ಸ್ವೀಕೃತಗೊಂಡ ಅರ್ಜಿಗಳನ್ನು ಹಾಗೂ ಸಂಬಂಧಪಟ್ಟ ಪೂರಕ ದಾಖಲೆಗಳನ್ನು ಕೆಳಕಂಡ ಸೂಚನೆಯಂತೆ ಡಾ. ಪಿ. ಸದಾನಂದಮಯ್ಯ ಕಟ್ಟಡದ ಕಂಪ್ಯೂಟರ್ ಲ್ಯಾಬ್‌ನಲ್ಲಿ ನಿಯಮಾನುಸಾರ ಪರಿಶೀಲಿಸಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ದಿನಾಂಕ:22.07.2026 ರೊಳಗಾಗಿ ಸಿದ್ಧಪಡಿಸುವಂತೆ ಸಂಬಂಧಪಟ್ಟ ಸ್ನಾತಕ ವಿಭಾಗಗಳ ಮುಖ್ಯಸ್ಥರುಗಳಿಗೆ ಈ ಮೂಲಕ ತಿಳಿಸಲಾಗಿದೆ.

- ಅಭ್ಯರ್ಥಿಗಳು ಸಂಬಂಧಪಟ್ಟ ವಿಷಯದ ಸ್ನಾತಕೋತ್ತರ ಪದವಿಯಲ್ಲಿ ಶೇ. 55 ಅಂಕಗಳು (ಸಾಮಾನ್ಯ ಮತ್ತು ಇತರೆ ವರ್ಗದ ಅಭ್ಯರ್ಥಿಗಳು) ಹಾಗೂ ಶೇ. 50 ಅಂಕಗಳೊಂದಿಗೆ (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು) ಉತ್ತೀರ್ಣರಾಗಿರತಕ್ಕದ್ದು.
- ಅಭ್ಯರ್ಥಿಗಳು NET/SLET/SET/Ph.D ವಿದ್ಯಾರ್ಹತೆ ಹೊಂದಿರುವ ಬಗ್ಗೆ.
- ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳ ಮಾನ್ಯತೆ.
- ನಿವೃತ್ತ ಅಧ್ಯಾಪಕರು ಗರಿಷ್ಠ 70 ವರ್ಷಗಳ ವಯೋಮಿತಿ ಮೀರದಿರುವ ಬಗ್ಗೆ.
- ವಿಶ್ವವಿದ್ಯಾನಿಲಯ/ಸರ್ಕಾರಿ/ಅನುದಾನಿತ ಕಾಲೇಜುಗಳಲ್ಲಿನ ವಿವಿಧ ಸ್ನಾತಕ/ಸ್ನಾತಕೋತ್ತರ ವಿಭಾಗಗಳಲ್ಲಿ ಕರ್ತವ್ಯ ನಿರ್ವಹಿಸಿರುವ ಬಗ್ಗೆ ಸಲ್ಲಿಸಿರುವ ಸೇವಾ ಪ್ರಮಾಣ ಪತ್ರಗಳ ಪರಿಶೀಲನೆ.
- ISBN/ISSN/ISO ಹೊಂದಿರುವ ರಾಷ್ಟ್ರೀಯ/ಅಂತಾರಾಷ್ಟ್ರೀಯ ಮಟ್ಟದ ನಿಯತಕಾಲಿಕೆಗಳಲ್ಲಿ ಪ್ರಕಟಣೆಗಳನ್ನು ಪ್ರಕಟಿಸಿರುವ ಬಗ್ಗೆ ಪರಿಶೀಲಿಸುವುದು.

16-07-2026

ಉಪಕುಲಸಚಿವರು
ಅಭಿವೃದ್ಧಿ ವಿಭಾಗ

ಗೆ,

ಮುಖ್ಯಸ್ಥರು – ಕನ್ನಡ, ಇಂಗ್ಲೀಷ್, ಹಿಂದಿ, ಉರ್ದು, ಸಂಸ್ಕೃತ, ಇತಿಹಾಸ, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ಪತ್ರಿಕೋದ್ಯಮ, ರಾಜ್ಯಶಾಸ್ತ್ರ, ವಾಣಿಜ್ಯ & ನಿರ್ವಹಣಾಶಾಸ್ತ್ರ, ಸಮಾಜಕಾರ್ಯ, ಮನೋವಿಜ್ಞಾನ, ಗ್ರಂಥಾಲಯ & ಮಾಹಿತಿ ವಿಜ್ಞಾನ, ದೈಹಿಕ ಶಿಕ್ಷಣ, ವಿದ್ಯುನ್ಮಾನ, ಬಿ.ಎಸ್ಸಿ.(ಗಣಕ ವಿಜ್ಞಾನ)/ಬಿ.ಸಿ.ಎ./ಬಿ.ಸಿ.ಎ.(ಡಾಟಾ ಸೈನ್ಸ್), ಸೂಕ್ಷ್ಮಜೀವಶಾಸ್ತ್ರ, ಜೈವಿಕ ತಂತ್ರಜ್ಞಾನ, ಜೀವರಸಾಯನಶಾಸ್ತ್ರ, ಗಣಿತಶಾಸ್ತ್ರ, ಪ್ರಾಣಿಶಾಸ್ತ್ರ, ಭೌತಶಾಸ್ತ್ರ, ಸಸ್ಯಶಾಸ್ತ್ರ ಮತ್ತು ರಸಾಯನಶಾಸ್ತ್ರ.

ಪ್ರತಿಗಳು :

1. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಮಾಹಿತಿಗಾಗಿ ಹಾಗೂ ಅರ್ಜಿಗಳ ಪರಿಶೀಲನೆಗೆ ಸೂಕ್ತ ಕ್ರಮವಹಿಸುವುದು.
6. ಶ್ರೀ ಸಂತೋಷ್ ಬಿ. ಅಕ್ಕಿ, ಕಂಪ್ಯೂಟರ್ ಪ್ರೋಗ್ರಾಮರ್ ; ಶ್ರೀ ಪ್ರವೀಣ್ ಕುಮಾರ್ ಟಿ., ಐ.ಟಿ. ಕನ್ಸಲ್ಟೆಂಟ್ ; ಶ್ರೀ ಯೋಗೀಶ್ ಎಂ.ಎಸ್., ಐ.ಟಿ. ಕನ್ಸಲ್ಟೆಂಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. – ಅಗತ್ಯ ಕ್ರಮಕ್ಕಾಗಿ
7. ಶ್ರೀ ಜಯಸಿಂಹ ಕೆ.ಬಿ., ದ್ವಿತೀಯ ದರ್ಜೆ ಸಹಾಯಕರು, ಕಂಪ್ಯೂಟರ್ ಲ್ಯಾಬ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. – ಅಗತ್ಯ ಕ್ರಮಕ್ಕಾಗಿ
8. ಕಚೇರಿ ಪ್ರತಿ.